ಕಮಲಾಪುರ ವಿಧಾನ ಸಭಾ ಕ್ಷೇತ್ರದಲ್ಲಿನ ಪದವಿಪೂರ್ವ ಕಾಲೇಜುಗಳಿಗೆ ಸ್ವಂತ ಕಟ್ಟಡ

317 (496) ಶ್ರೀ ರೇವುನಾಯಕ್ ಬಿಳಮಗಿ (ಕಮಲಪುರ್) - ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕಮಲಾಪುರ ವಿಧಾನಸಭಾ ವ್ಯಾಪ್ತಿಯಲ್ಲಿರುವ ಪದವಿಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ;

ಆ) ಇವುಗಳಲ್ಲಿ ಎಷ್ಟು ಕಾಲೇಜುಗಳು ಸ್ವಂತ ಕಟ್ಟಡ ಹೊಂದಿವೆ ; ಎಷ್ಟು ಕಾಲೇಜುಗಳು ಬಾಡಿಗೆ ಕಟ್ಟಡದಲ್ಲಿವೆ ;

ಇ) ಸ್ವಂತ ಕಟ್ಟಡ ಹೊಂದಿರದ ಕಾಲೇಜುಗಳಿಗೆ ಸ್ವಂತ ಕಟ್ಟಡ ಒದಗಿಸುವಲ್ಲಿ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ?

ಪ್ರೊ।। ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು)

ಅ) ಕಮಲಾಪುರ ವಿಧಾನಸಭಾ ವ್ಯಾಪ್ತಿಯಲ್ಲಿ 4 ಸರ್ಕಾರಿ ಪದವಿ ಪೂರ್ವ ಕಾಲೇಜುಗಳು ಹಾಗೂ 01 ಖಾಸಗಿ ಅನುದಾನಿತ ಪದವೀ ಪೂರ್ವ ಕಾಲೇಜುಗಳು ಹೀಗೆ ಒಟ್ಟು 05 ಪದವೀ ಪೂರ್ವ ಕಾಲೇಜುಗಳಿರುತ್ತವೆ.

ಆ) ಎಲ್ಲಾ ಕಾಲೇಜುಗಳು ಸ್ವಂತ ಕಟ್ಟಡ ಹೊಂದಿರುತ್ತವೆ.

ಇ) ಅನ್ವಯಿಸುವುದಿಲ್ಲ.

ಕಮಲಾಪುರ ವಿಧಾನ ಸಭಾ ಕ್ಷೇತ್ರದಲ್ಲಿರುವ ಪ್ರೌಢಶಾಲೆಗಳಿಗೆ ಸ್ವಂತ ಕಟ್ಟಡ

319 (498) ಶ್ರೀ ರೇವುನಾಯಕ್ ಬಿಳಮಗಿ (ಕಮಲಪುರ್) - ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕಮಲಾಪುರ ವಿಧಾನಸಭಾ ಕ್ಷೇತ್ರದಲ್ಲಿರುವ ಪ್ರೌಢಶಾಲೆಗಳೆಷ್ಟು ;

ಆ) ಇವುಗಳಲ್ಲಿ ಸ್ವಂತ ಕಟ್ಟಡ ಹೊಂದಿರುವ ಹಾಗೂ ಸ್ವಂತ ಕಟ್ಟಡ ಇಲ್ಲದೆ ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಪ್ರಾಥಮಿಕ - ಪ್ರೌಢಶಾಲೆಗಳೆಷ್ಟು ;

ಇ) ಸ್ವಂತ ಕಟ್ಟಡ ಹೊಂದಿರದ ಶಾಲೆಗಳಿಗೆ ಸ್ವಂತ ಕಟ್ಟಡ ಹೊಂದುವಲ್ಲಿ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ?

ಪ್ರೊ।। ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಕಮಲಾಪುರ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 20 ಪ್ರೌಢ ಶಾಲೆಗಳು ಇರುತ್ತದೆ.

ಆ) ಇವುಗಳಲ್ಲಿ ಒಟ್ಟು 14 ಪ್ರೌಢ ಶಾಲೆಗಳಿಗೆ ಸ್ವಂತ ಕಟ್ಟಡವಿದ್ದು 06 ಪ್ರೌಢ ಶಾಲೆಗಳಿಗೆ ಸ್ವಂತ ಕಟ್ಟಡ ಇರುವುದಿಲ್ಲ. ಯಾವುದೇ ಶಾಲೆಗಳು ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವುದಿಲ್ಲ.

ಇ) ರಾಜ್ಯ ಯೋಜನೆಯಡಿ ಸ್ವಂತ ಕಟ್ಟಡವಿರದ ಪ್ರೌಢ ಶಾಲೆಗಳಿಗೆ ಸ್ವಂತ ಕಟ್ಟಡ ನಿರ್ಮಿಸಲು ಅನುದಾನ ಬಿಡುಗಡೆ ಮಾಡಲಾಗುತ್ತಿದೆ. (ಈ ಸಾಲಿಗೆ ಕೊತ್ತನ ಹಿಪ್ಪರಗಾ ಸರ್ಕಾರಿ ಪ್ರೌಢ ಶಾಲೆಗೆ 2 ಕೊಠಡಿಗಳ ನಿರ್ಮಾಣಕ್ಕೆ ಅನುದಾನ ಒದಗಿಸಿದೆ), ಅಲ್ಲದೇ ಹುಡ್ಕೋ ಯೋಜನೆಯಡಿಯೂ ಸ್ವಂತ ಕಟ್ಟಡವಿರದ ಪ್ರೌಢ ಶಾಲೆಗಳಿಗೆ ಸ್ವಂತ ಕಟ್ಟಡ ನಿರ್ಮಿಸಲು ಅನುದಾನ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗಿದೆ.